**Akashvani : Bangalore**

**24.12.2024** **19.35 hrs**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು**

**೧. ರಾಷ್ಟ್ರೀಯ ಗ್ರಾಹಕರ ದಿನ; ದೇಶಾದ್ಯಂತ ವಿವಿಧ ಕಾಯಕ್ರಮಗಳ ಮೂಲಕ ಗ್ರಾಹಕರಲ್ಲಿ ಜಾಗೃತಿ**

**೨. ಒಂದು ರಾಷ್ಟ್ರ, ಒಂದು ಚುನಾವಣೆ; ಜನವರಿ ೮ ರಂದು ಜಂಟಿ ಸಂಸದೀಯ ಸಮಿತಿಯ ಮೊದಲ ಸಭೆ**

**೩. ಖ್ಯಾತ ಚಲನಚಿತ್ರ ನಿರ್ದೇಶಕ ಶ್ಯಾಮ್ ಬೆನಗಲ್ ಪಂಚಭೂತಗಳಲ್ಲಿ ಲೀನ**

**೪. ವನಿತಾ ಏಕದಿನ ಕ್ರಿಕೆಟ್; ವೆಸ್ಟ್ ಇಂಡೀಸ್‌ಗೆ ೩೫೯ ರನ್‌ಗಳ ಬೃಹತ್ ಗುರಿ ನೀಡಿದ ಭಾರತ ತಂಡ**

**<><*<><>*><>**

ದೇಶಾದ್ಯಂತ ಇಂದು ರಾಷ್ಟ್ರೀಯ ಗ್ರಾಹಕರ ದಿನವನ್ನು ಆಚರಿಸಲಾಯಿತು. ಗ್ರಾಹಕರ ಆಂದೋಲನದ ಮಹತ್ವವನ್ನು ಸಾರಲು ಮತ್ತು ಪ್ರತಿಯೊಬ್ಬ ಗ್ರಾಹಕನ ಹಕ್ಕುಗಳು ಮತ್ತು ಜವಾಬ್ದಾರಿಗಳ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಡಿಸೆಂಬರ್ ೨೪ ಅನ್ನು ರಾಷ್ಟ್ರೀಯ ಗ್ರಾಹಕರ ದಿನವಾಗಿ ಆಚರಿಸಲಾಗುತ್ತದೆ. ಇದೇ ದಿನದಂದು ಗ್ರಾಹಕ ಸಂರಕ್ಷಣಾ ಕಾಯಿದೆ-೧೯೮೬ ಅನ್ನು ಜಾರಿಗೊಳಿಸಲಾಗಿತ್ತು. ಈ ಕಾಯಿದೆ, ದೋಷಪೂರಿತ ಸರಕುಗಳು, ಸೇವೆಗಳಲ್ಲಿನ ಕೊರತೆ ಮತ್ತು ಮೋಸದ ವ್ಯಾಪಾರ ಸೇರಿದಂತೆ ವಿವಿಧ ರೀತಿಯ ಶೋಷಣೆಗಳ ವಿರುದ್ಧ ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಗ್ರಾಹಕರಿಗೆ ಒದಗಿಸುವ ಉದ್ದೇಶವನ್ನು ಹೊಂದಿದೆ. ವರ್ಚುವಲ್ ಹಿಯರಿಂಗ್ಸ್ ಮತ್ತು ಗ್ರಾಹಕರ ನ್ಯಾಯಕ್ಕೆ ಡಿಜಿಟಲ್ ಪ್ರವೇಶ ಎಂಬುದು ಈ ವರ್ಷ ರಾಷ್ಟ್ರೀಯ ಗ್ರಾಹಕರ ದಿನದ ಧ್ಯೇಯವಾಕ್ಯವಾಗಿದೆ. ರಾಷ್ಟ್ರೀಯ ಗ್ರಾಹಕರ ದಿನದ ಅಂಗವಾಗಿ ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಅವರು ನವದೆಹಲಿಯಲ್ಲಿಂದು ನಡೆದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮದಲ್ಲಿ ವಿಡಿಯೊ ಕಾನ್ಫರೆನ್ಸ್ ಮೂಲಕ ಭಾಗವಹಿಸಿದರು. ಈ ವೇಳೆ ಅವರು, ಗುವಾಹಟಿಯ ಸಾವಯವ ಆಹಾರ ಪರೀಕ್ಷಾ ಪ್ರಯೋಗಾಲಯವನ್ನು ಸೇರಿದಂತೆ ಹಲವು ಪ್ರಯೋಗಾಲಯಗಳ ಉದ್ಘಾಟನೆ ನೆರವೇರಿಸಿದರು. ಗ್ರಾಹಕರ ದಿನದ ಅಂಗವಾಗಿ ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಗ್ರಾಹಕರ ಹಕ್ಕುಗಳನ್ನು ರಕ್ಷಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ. ಸುರಕ್ಷಿತ, ಪಾರದರ್ಶಕ ಹಾಗೂ ವಿಶ್ವಾಸರ್ಹ ವ್ಯಾಪಾರ

ಪರಿಸರವನ್ನು ಗ್ರಾಹಕರಿಗೆ ಒದಗಿಸಲು ಹಾಗೂ ಮೋಸದ ವ್ಯಾಪಾರದ ಮೇಲೆ ಕಟ್ಟುನಿಟ್ಟಿನ ನಿಗಾವಹಿಸಿ ಗ್ರಾಹಕರ ಹಿತ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದಿದ್ದಾರೆ.

**ಧ್ವನಿ: ಪ್ರಲ್ಹಾದ್ ಜೋಶಿ**

**<><*<><>*><>**

ಒಂದು ರಾಷ್ಟ್ರ ಒಂದು ಚುನಾವಣೆಗೆ ಸಂಬಂಧಿಸಿದ ಎರಡು ವಿಧೇಯಕಗಳ ಕುರಿತು ಜಂಟಿ ಸಂಸದೀಯ ಸಮಿತಿಯ ಮೊದಲ ಸಭೆ ಮುಂದಿನ ತಿಂಗಳು ೮ ರಂದು ನಡೆಯಲಿದೆ. ೩೯ ಸದಸ್ಯರ ಸಮಿತಿಯಲ್ಲಿ ಲೋಕಸಭೆಯಿಂದ ೨೭ ಸದಸ್ಯರು ಮತ್ತು ರಾಜ್ಯಸಭೆಯಿಂದ ೧೨ ಸದಸ್ಯರನ್ನು ಹೊಂದಿದೆ. ಮುಂದಿನ ಸಂಸತ್ ಅಧಿವೇಶನದ ಮೊದಲ ದಿನದೊಳಗೆ ಸಮಿತಿಯು ತನ್ನ ವರದಿಯನ್ನು ಸದನಕ್ಕೆ ಸಲ್ಲಿಸಲಿದೆ. ಸಮಿತಿಯಲ್ಲಿ ಬಿಜೆಪಿ ನಾಯಕರಾದ ಪಿ.ಪಿ.ಚೌಧರಿ, ಅನುರಾಗ್ ಸಿಂಗ್ ಠಾಕೂರ್, ಮತ್ತು ಪರ್ಷೋತ್ತಂಬಾಯಿ ರೂಪಾಲಾ, ಕಾಂಗ್ರೆಸ್ ನಾಯಕರಾದ ಪ್ರಿಯಾಂಕಾ ಗಾಂಧಿ ಮತ್ತು ಮನೀಶ್ ತಿವಾರಿ, ಟಿಎಂಸಿಯ ಕಲ್ಯಾಣ್ ಬ್ಯಾನರ್ಜಿ, ಎನ್‌ಸಿಪಿ ಯ ಸುಪ್ರಿಯಾ ಸುಳೆ ಸೇರಿದಂತೆ ಲೋಕಸಭೆಯ ಸದಸ್ಯರು ಇರಲಿದ್ದಾರೆ. ರಾಜ್ಯಸಭೆಯಿಂದ ಘನಶ್ಯಾಮ್ ತಿವಾರಿ, ಬಿಜೆಪಿಯ ಭುವನೇಶ್ವರ್ ಕಲಿತಾ ಮತ್ತು ಕೆ.ಲಕ್ಷ್ಮಣ್ ಮತ್ತು ಕಾಂಗ್ರೆಸ್‌ನ ರಣದೀಪ್ ಸಿಂಗ್ ಸುರ್ಜೆವಾಲಾ ಮತ್ತು ಮುಕುಲ್ ಬಾಲಕೃಷ್ಣ ವಾಸ್ನಿಕ್, ಜೆಡಿಯುನ ಸಂಜಯ್ ಕುಮಾರ್ ಝಾ ಮತ್ತು ವೈಎಸ್‌ಆರ್ ಕಾಂಗ್ರೆಸ್‌ನ ವಿ.ವಿಜಯಸಾಯಿ ರೆಡ್ಡಿ ಇತರರು ಸಂಸದೀಯ ಸಮಿತಿಯ ಸದಸ್ಯರಾಗಿದ್ದಾರೆ. ವಿಧೇಯಕಗಳನ್ನು ಅಧಿಕೃತವಾಗಿ ಸಂವಿಧಾನದ ೧೨೯ನೇ ತಿದ್ದುಪಡಿ ವಿಧೇಯಕ- ೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ ತಿದ್ದುಪಡಿ ವಿಧೇಯಕ- ೨೦೨೪ ಎಂದು ಹೆಸರಿಸಲಾಗಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯ ನೀತಿ ಆಯೋಗ ಕಚೇರಿಯಲ್ಲಿ ಖ್ಯಾತ ಅರ್ಥಶಾಸ್ತ್ರಜ್ಞರೊಂದಿಗೆ ಬಜೆಟ್ ಪೂರ್ವ ಸಮಾಲೋಚನೆಯಲ್ಲಿ ಭಾಗವಹಿಸಿದ್ದರು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ನೀತಿ ಆಯೋಗದ ಸಿಇಒ ಬಿ.ವಿ.ಆರ್.ಸುಬ್ರಮಣ್ಯಂ ಮತ್ತು ಇತರೆ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು. ಕೇಂದ್ರ ಬಜೆಟ್ ೨೦೨೫-೨೬ ರ ಬಜೆಟ್ ಪೂರ್ವ ಸಮಾಲೋಚನೆಗಳು ಈ ತಿಂಗಳ ೬ ರಂದು ಪ್ರಾರಂಭವಾಯಿತು. ಸಚಿವೆ ನಿರ್ಮಲಾ ಸೀತಾರಾಮನ್ ಅವರು, ವಿವಿಧ ರಾಜ್ಯಗಳ ಹಣಕಾಸು ಸಚಿವರು, ರೈತ ಸಂಘಗಳು, ಅರ್ಥಶಾಸ್ತ್ರಜ್ಞರು ಮತ್ತು ಎಂಎಸ್‌ಎಂಇ ಪ್ರಮುಖರೊಂದಿಗೆ ಸಮಾಲೋಚನೆ ನಡೆಸಿದರು.

ಕೇಂದ್ರ ಹಣಕಾಸು ಸಚಿವರು ಮುಂಬರುವ ಫೆಬ್ರವರಿ ೧ ರಂದು ಲೋಕಸಭೆಯಲ್ಲಿ ೨೦೨೫-೨೬ ರ ಬಜೆಟ್ ಅನ್ನು ಮಂಡಿಸುವ ನಿರೀಕ್ಷೆಯಿದೆ.

<><*<><>*><>

ಖ್ಯಾತ ಚಲನಚಿತ್ರ ನಿರ್ದೇಶಕ ಶ್ಯಾಮ್ ಬೆನಗಲ್ ಮುಂಬೈನಲ್ಲಿ ನಿನ್ನೆ ನಿಧನರಾಗಿದ್ದಾರೆ. ಅವರಿಗೆ ೯೦ ವರ್ಷ ವಯಸ್ಸಾಗಿತ್ತು. ಕಿಡ್ನಿ ಸಮಸ್ಯೆಯಿಂದ ಬಳಲುತ್ತಿದ್ದ ಅವರನ್ನು ಮುಂಬೈನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಅವರು ನಿಧನರಾದರು. ಮುಂಬೈ ದಾದರ್‌ನಲ್ಲಿಂದು ಅಂತ್ಯಸಂಸ್ಕಾರ ನಡೆಯಿತು. ಹಿಂದಿ ಸಿನಿಮಾ ರಂಗದ ದಿಗ್ಗಜರು ಸೇರಿದಂತೆ ಗಣ್ಯರು ಅವರ ಅಂತಿಮ ದರ್ಶನ ಪಡೆದರು. ೬ ದಶಕಗಳಿಂದ ಭಾರತೀಯ ಚಲನಚಿತ್ರರಂಗದ ಹಿರಿಮೆಯನ್ನು ಹೆಚ್ಚಿಸಿದ್ದ ಶ್ಯಾಮ್ ಬೆನಗಲ್, ಮಂಥನ್, ಭೂಮಿಕಾ: ದ ರೋಲ್, ಜುನೂನ್, ಆರೋಹಣ್, ನೇತಾಜಿ ಸುಭಾಸ್ ಚಂದ್ರಬೋಸ್-ದ ಫರ್ಗಾಟನ್ ಹೀರೋ ಹಾಗೂ ವೆಲ್ ಡನ್ ಅಬ್ಬಾ ಸೇರಿದಂತೆ ಹಲವು ಚಿತ್ರಗಳ ನಿರ್ದೇಶನಕ್ಕಾಗಿ ರಾಷ್ಟ್ರೀಯ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದರು. ಉಡುಪಿ ಜಿಲ್ಲೆಯ ಬೆನಗಲ್ ಮೂಲದ ಶ್ಯಾಮ್ ಬೆನಗಲ್, ಭಾರತೀಯ ಸಿನಿಮಾ ಜಗತ್ತಿನಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿದ್ದರು. ಅಂಕುರ್, ನಿಶಾಂತ್, ಜುಬೇದಾ ಸೇರಿದಂತೆ ಹಲವು ಸಾಮಾಜಿಕ ಕಳಕಳಿಯ ಚಿತ್ರಗಳಿಂದ ಮನೆ ಮಾತಾಗಿದ್ದರು. ಚಲನಚಿತ್ರ ಮಾತ್ರವಲ್ಲದೇ, ಭಾರತ್ ಏಕ್ ಕೋಜ್ ಸೇರಿದಂತೆ ಹಲವು ಟೀವಿ ಪ್ರಸಾರಗಳು ಅವರ ಖ್ಯಾತಿಯನ್ನು ಹೆಚ್ಚಿಸಿದ್ದವು. ದಾದಾ ಸಾಹೇಬ್ ಫಾಲ್ಕೆ, ಪದ್ಮಶ್ರೀ ಹಾಗೂ ಪದ್ಮ ಭೂಷಣ ಪ್ರಶಸ್ತಿಗಳಿಗೆ ಅವರು ಭಾಜನರಾಗಿದ್ದರು. ಶ್ಯಾಮ್ ಬೆನೆಗಲ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಭಾರತೀಯ ಚಿತ್ರರಂಗದ ಮೇಲೆ ಆಳವಾದ ಪ್ರಭಾವ ಬೀರಿದ ಬೆನಗಲ್ ಅವರ ಕೊಡುಗೆಗಳು ಸಮಾಜದ ವಿವಿಧ ಕ್ಷೇತ್ರಗಳ ಜನರ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸ್ಮರಿಸಿದ್ದಾರೆ.

<><*<><>*><>

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ೧೦೦ನೇ ಜನ್ಮದಿನದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಅವರು, ಖಜುರಾಹೋದಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬಳಿಕ ಪ್ರಧಾನಿ ಅವರು, ಕೇನ್ ಬೆಟ್ವಾ ನದಿ ಸಂಪರ್ಕ ರಾಷ್ಟ್ರೀಯ ಯೋಜನೆಗೆ ಶಿಲಾನ್ಯಾಸ ಮಾಡಲಿದ್ದಾರೆ. ಇದು ದೇಶದ ನದಿಗಳ ಸಂಪರ್ಕ ಯೋಜನೆಯಾಗಿದೆ. ಈ ಯೋಜನೆಯು ಮಧ್ಯಪ್ರದೇಶ ಮತ್ತು ಉತ್ತರ ಪ್ರದೇಶದ ವಿವಿಧ ಜಿಲ್ಲೆಗಳಿಗೆ ನೀರಾವರಿ ಸೌಲಭ್ಯಗಳನ್ನು ಒದಗಿಸಿ, ಲಕ್ಷಾಂತರ ರೈತ ಕುಟುಂಬಗಳಿಗೆ

ಪ್ರಯೋಜನವನ್ನು ನೀಡಲಿದೆ. ಈ ಯೋಜನೆಯಿಂದ ಈ ಭಾಗದ ಜನರಿಗೆ ಕುಡಿಯುವ ನೀರಿನ ಸೌಲಭ್ಯವು ದೊರೆಯಲಿದೆ. ಅಟಲ್ ಬಿಹಾರಿ ವಾಜಪೇಯಿ ಅವರು ೧೦೦ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು, ವಾಜಪೇಯಿ ಅವರ ಸ್ಮರಣಾರ್ಥ ಅಂಚೆ ಚೀಟಿ ಮತ್ತು ನಾಣ್ಯವನ್ನು ಬಿಡುಗಡೆ ಮಾಡಲಿದ್ದಾರೆ. ೧ ಸಾವಿರದ ೧೫೩ ಅಟಲ್ ಗ್ರಾಮ ಸುಶಾಸನ ಕಟ್ಟಡಗಳ ಶಂಕು ಸ್ಥಾಪನೆಯನ್ನು ನೆರವೇರಿಸಲಿದ್ದಾರೆ. ಈ ಕಟ್ಟಡಗಳು ಸ್ಥಳೀಯ ಮಟ್ಟದಲ್ಲಿ ಉತ್ತಮ ಆಡಳಿತಕ್ಕೆ ಕಾರಣವಾಗುವ ಗ್ರಾಮ ಪಂಚಾಯಿತ್‌ಗಳ ಕಾರ್ಯ ಮತ್ತು ಜವಾಬ್ದಾರಿಗಳ ಪ್ರಾಯೋಗಿಕ ನಿರ್ವಹಣೆಯಲ್ಲಿ ಪ್ರಮುಖ ಪಾತ್ರವಹಿಸುತ್ತವೆ.

**<><*<><>*><>**

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದ ಅಂಗವಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಇಂದು ಲಕ್ನೋದಲ್ಲಿ ಅಟಲ್ ಯುವ ಮಹಾಕುಂಭ ಮತ್ತು ಅಟಲ್ ಆರೋಗ್ಯ ಮೇಳವನ್ನು ಉದ್ಘಾಟಿಸಿದರು. ಇದೇ ವೇಳೆ ಉಭಯ ನಾಯಕರು ಲಕ್ನೋದಲ್ಲಿ ೬೬೨ ಕೋಟಿ ರೂಪಾಯಿಗಳ ೧೮೧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು.  ಈ ಸಂದರ್ಭದಲ್ಲಿ ಮಾತನಾಡಿದ ರಕ್ಷಣಾ ಸಚಿವರು, ಅಟಲ್ ಬಿಹಾರಿ ವಾಜಪೇಯಿ ಅವರ ಅವರ ಜೀವನ ಮತ್ತು ವಿಚಾರಧಾರೆ ಇಂದಿಗೂ ಸ್ಫೂರ್ತಿಯ ಚಿಲುಮೆಯಾಗಿದೆ ಎಂದು ಹೇಳಿದರು.

**ಧ್ವನಿ: ರಾಜನಾಥ್ ಸಿಂಗ್**

ನಂತರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸಂಜೆ ನಡೆದ 'ಅಟಲ್ ಗೀತ್ ಗಂಗಾ' ಕವನ ವಾಚನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಅವರು ನಾಳೆ ಲಕ್ನೋದಲ್ಲಿ ಸುಶಾಸನ್ ದಿವಸ್ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

**<><*<><>*><>**

ಗುಜರಾತ್‌ನ ವಡ್‌ನಗರದಲ್ಲಿ 'ಮೈ ಭಾರತ್ ಉತ್ತಮ ಆಡಳಿತ' ಪಾದಯಾತ್ರೆಗೆ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ ಇಂದು ಚಾಲನೆ ನೀಡಿದರು.  ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಅಂಗವಾಗಿ ೮ ಕಿಲೋಮೀಟರ್ ಯಾತ್ರೆಯನ್ನು ಆಯೋಜಿಸಲಾಗಿದೆ. ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ರಾಜ್ಯ ಸಚಿವ ರಕ್ಷಾ ಖಡ್ಸೆ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಪಾದಯಾತ್ರೆಯಲ್ಲಿ ಸುಮಾರು ೧೫ ಸಾವಿರ ವಿದ್ಯಾರ್ಥಿಗಳು ಪಾಲ್ಗೊಂಡಿದ್ದು, ಭಾರತೀಯ ಸಂವಿಧಾನದ ೭೫ನೇ ವಾರ್ಷಿಕೋತ್ಸವದ ವರ್ಷಪೂರ್ತಿ ವರ್ಷದ ಆಚರಣೆಯ ಭಾಗವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

<><*<><>*><>

ಭಾರತ ವಿರೋಧಿ ಸಂಘಟನೆಗಳು ಮತ್ತು ಸಂಪರ್ಕ ಜಾಲಗಳನ್ನು ಪತ್ತೆಹಚ್ಚಲು ಮಿತ್ರ ರಾಷ್ಟ್ರಗಳೊಂದಿಗೆ ಗುಪ್ತಚರ ಸಮನ್ವಯ ಕಾರ್ಯತಂತ್ರವನ್ನು ಅಭಿವೃದ್ಧಿಪಡಿಸುವ ಅಗತ್ಯವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿ ೩೭ನೇ ಗುಪ್ತಚರ ಇಲಾಖೆಯ ಶತಮಾನೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ನಿರ್ಣಾಯಕ ಮೂಲಸೌಕರ್ಯಗಳ ಮೇಲಿನ ದಾಳಿಗಳು ಸೈಬರ್ ದಾಳಿಗಳು ಮತ್ತು ಯುವಕರ ಸಮಗ್ರ ದೃಷ್ಟಿಕೋನದಂತಹ ಸವಾಲುಗಳನ್ನು ಎದುರಿಸಲು, ಪರಿಹಾರವನ್ನು ಕಂಡುಹಿಡಿಯಲು, ಕ್ರಿಯಾತ್ಮಕವಾಗಿ ಯೋಚಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

<><*<><>*><>

ಗುಜರಾತ್‌ನ ವಡೋದರದ ಕೊಟಂಬಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಅಂತಾರಾಷ್ಟ್ರೀಯ  ಮಹಿಳಾ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ ಮಹಿಳಾ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೩೫೮ ರನ್ ಗಳಿಸಿತು. ೩೫೯ ರನ್‌ಗಳ ಗೆಲುವಿನ ಗುರಿಯನ್ನು ಬೆನ್ನತ್ತಿರುವ ವೆಸ್ಟ್ ಇಂಡೀಸ್ ಮಹಿಳಾ ತಂಡ, ಇತ್ತೀಚಿನ ವರದಿ ಬಂದಾಗ ೨೬ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೨೬ ರನ್ ಮಾಡಿ ಆಡುತ್ತಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**